ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	1949
ಸದಸ್ಯರ ಹೆಸರು	:	ಶ್ರೀ.ಸಲೀಂ ಅಹಮದ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸುವ ದಿನಾಂಕ	:	16.03.2022
ಉತ್ತರಿಸುವ ಸಚಿವರು	:	ಪಶುಸಂಗೋಪನೆ ಸಚಿವರು

<table>
<tr><th>ಕ್ರ.ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಧಾರವಾಡ, ಹಾವೇರಿ, ಗದಗ್ ಜಿಲ್ಲೆಗಳಲ್ಲಿ ಇರುವ ಪಶುಚಿಕಿತ್ಸಾ ಕೇಂದ್ರಗಳ ಸಂಖ್ಯೆ ಎಷ್ಟು;</td><td>ಧಾರವಾಡ, ಹಾವೇರಿ, ಗದಗ್ ಜಿಲ್ಲೆಗಳಲ್ಲಿ ಇರುವ ಪಶು ಚಿಕಿತ್ಸಾ ಕೇಂದ್ರಗಳ ವಿವರ ಈ ಕೆಳಕಂಡಂತಿದೆ.
<table>
<tr><th>ಕ್ರ.ಸಂ</th><th>ಜಿಲ್ಲೆಯ ಹೆಸರು</th><th>ಒಟ್ಟು ಪಶುವೈದ್ಯಕೀಯ ಸಂಸ್ಥೆಗಳು</th></tr>
<tr><td>1</td><td>ಧಾರವಾಡ</td><td>112</td></tr>
<tr><td>2</td><td>ಹಾವೇರಿ</td><td>146</td></tr>
<tr><td>3</td><td>ಗದಗ್</td><td>87</td></tr>
<tr><td></td><td>ಒಟ್ಟು</td><td>345</td></tr>
</table></td></tr>
<tr><td>ಆ)</td><td>ಜಾನುವಾರುಗಳಿಗೆ ಚಿಕಿತ್ಸೆ ನೀಡಲು ಚಿಕಿತ್ಸಾ ಕೇಂದ್ರಗಳ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;</td><td>ಬಂದಿರುವುದಿಲ್ಲ.</td></tr>
<tr><td>ಇ)</td><td>ಈ ಎಲ್ಲಾ ಚಿಕಿತ್ಸಾ ಕೇಂದ್ರಗಳಿಗೆ ಮೂಲಭೂತ ಸೌಕರ್ಯಗಳನ್ನು ಮತ್ತು ಔಷಧಿಗಳನ್ನು ಸರಬರಾಜು ಮಾಡಲಾಗಿದೆಯೇ;</td><td>ಎಲ್ಲಾ ಪಶು ಚಿಕಿತ್ಸಾ ಕೇಂದ್ರಗಳಿಗೆ ಮೂಲಭೂತ ಸೌಕರ್ಯಗಳನ್ನು ಮತ್ತು ಔಷಧಿಗಳನ್ನು ಅನುದಾನದ ಲಭ್ಯತೆಗೆ ಅನುಗುಣವಾಗಿ ಸರಬರಾಜು ಮಾಡಲಾಗುತ್ತಿದೆ.</td></tr>
<tr><td>ಈ)</td><td>ಜಾನುವಾರುಗಳಿಗೆ ಚಿಕಿತ್ಸೆ ನೀಡಲು ವೈದ್ಯರುಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಯಾವಾಗ ಭರ್ತಿ ಮಾಡಲಾಗುವುದು?</td><td>ಬಂದಿದೆ.

ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಯಲ್ಲಿ 400 ಪಶುವೈದ್ಯಾಧಿಕಾರಿ ಹುದ್ದೆಗಳನ್ನು ತುಂಬಲು ಆರ್ಥಿಕ ಇಲಾಖೆಯು ಅನುಮತಿ ನೀಡಿದ್ದು, ಆಯ್ಕೆ ಪ್ರಕ್ರಿಯೆ ಜಾರಿಯಲ್ಲಿದೆ ಆಯ್ಕೆ ಪ್ರಕ್ರಿಯೆ ಮುಗಿದ ನಂತರ ಖಾಲಿ ಇರುವ</td></tr>
</table>

		ಪಶುವೈದ್ಯಾಧಿಕಾರಿಗಳ ಹುದ್ದೆಗಳನ್ನು ನೇಮಕ ಮಾಡಲು ಕ್ರಮವಹಿಸಲಾಗುವುದು. ಸದ್ಯ ಪಶುವೈದ್ಯಾಧಿಕಾರಿಗಳ ಖಾಲಿ ಇರುವ ಹುದ್ದೆಗಳಿಗೆ ಅಧಿಕ ಪ್ರಭಾರ ವ್ಯವಸ್ಥೆ ಮಾಡಿ ರೈತರ ಜಾನುವಾರುಗಳಿಗೆ ಚಿಕಿತ್ಸೆಗೆ ತೊಂದರೆಯಾಗದ ರೀತಿಯಲ್ಲಿ ಕಾರ್ಯನಿರ್ವಹಿಸಲಾಗುತ್ತಿದೆ.

ಸಂ: ಪಸಂಮೀ ಇ-63 ಪಸಸೇ 2022

(ಪ್ರಭು.ಬಿ.ಚವ್ಹಾಣ್)
ಪಶುಸಂಗೋಪನೆ ಸಚಿವರು